7. ವಿರೋಧ ಪಕ್ಷದ ಸದಸ್ಯರನ್ನು ಸದನಕ್ಕೆ ಕರೆಸಲು ಮನವಿ

ಶ್ರೀ ಪಿ.ಎಂ.ನರೇಂದ್ರಸ್ವಾಮಿ: ವಿರೋಧ ಪಕ್ಷಗಳವರನ್ನು ಸದನಕ್ಕೆ ಕರೆಸಲು ಒಂದು ಪ್ರಯತ್ನವನ್ನು ಮಾಡುವುದು ಸೂಕ್ತವೆನ್ನುವುದು ನನ್ನ ವೈಯಕ್ತಿಕವಾದಂಥ ಸಲಹೆ. ಇನ್ನೊಮ್ಮೆ ಆ ಪ್ರಯತ್ನವನ್ನು ಮಾಡಿ. ಬಿಲ್‌ಗಳನ್ನು ಪಾಸ್ ಮಾಡುವುದಕ್ಕೆ ನಮ್ಮ ಯಾವುದೇ ತರಹದ ಅಭ್ಯಂತರವಿಲ್ಲ. ದಯಮಾಡಿ ಇನ್ನೊಮ್ಮೆ ಪ್ರಯತ್ನ ಮಾಡಿ ಎನ್ನುವುದು ನನ್ನ ಮನವಿ. ರಾಜ್ಯಕ್ಕೆ ಒಂದು ಒಳ್ಳೆಯ ಸಂದೇಶ ಹೋಗಲಿ. ದಯವಿಟ್ಟು ಇದಕ್ಕೆ ಅವಕಾಶವನ್ನು ಮಾಡಿಕೊಡಿ ಎಂದು ಕೇಳುತ್ತಿದ್ದೇನೆ.

ಅಧ್ಯಕ್ಷರು: ಅವರು ದೂರವಾಣಿ ಸಂಪರ್ಕ ಮಾಡಿದರೂ ಸಿಗುತ್ತಿಲ್ಲ, ಏನು ಮಾಡುವುದು ಹೇಳಿ?

ಶ್ರೀ ಪಿ.ಎಂ. ನರೇಂದ್ರಸ್ವಾಮಿ: ಈ ವಿಚಾರದಲ್ಲಿ ತಾವು ತೆಗೆದುಕೊಳ್ಳುತ್ತಿರುವ ಏಕಪಕ್ಷೀಯ ನಿರ್ಣಯಕ್ಕೆ ವಿರೋಧ ವ್ಯಕ್ತಪಡಿಸಿ ಸದನದಿಂದ ಹೊರಗೆ ಹೋಗುತ್ತಿದ್ದೇನೆ.

ಶ್ರೀ ಸಿ.ಟಿ.ರವಿ: ನೀವೇ ಪ್ರಯತ್ನ ಮಾಡಬಹುದಲ್ಲ.?

(ಈ ಹಂತದಲ್ಲಿ ಪಕ್ಷೇತರ ಸದಸ್ಯರಾದ ಶ್ರೀ ಪಿ.ಎಂ. ನರೇಂದ್ರಸ್ವಾಮಿಯವರು ಸಭಾತ್ಯಾಗ ಮಾಡಿದರು)

8. ವಿತ್ತೀಯ ಕಾರ್ಯಕಲಾಪಗಳು

ಅಧ್ಯಕ್ಷರು: ಈಗ 2011–12ನೇ ಸಾಲಿನ ಈ ಕೆಳಕಂಡ ಬೇಡಿಕೆಗಳ ಮಂಡನೆ.

ಅನುದಾನ ಬೇಡಿಕೆಗಳು2011–12

ಬೇಡಿಕೆ ಸಂಖ್ಯೆ: 4 – ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 40,754.31 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 500.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 3 – ಆರ್ಥಿಕ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಆರ್ಥಿಕ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 7.16,713.46 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 782.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 19 – ನಗರಾಭಿವೃದ್ಧಿ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ನಗರಾಭಿವೃದ್ಧಿ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 5,16,850.36 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,89,885.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 8 – ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ

ಶ್ರೀ ಸಿ.ಹೆಚ್.ವಿಜಯಶಂಕರ್ (ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖಾ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 68,767.29 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 355.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವು ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 25–ಕನ್ನಡ ಮತ್ತು ಸಂಸ್ಕೃತಿ

ಶ್ರೀ ಗೋವಿಂದ ಎಂ.ಕಾರಜೋಳ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕನ್ನಡ ಮತ್ತು ಸಂಸ್ಕೃತಿ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 24,829.75 ಲಕ್ಷ ರೂ.ಗಳಿಗಿಂತ ಮೀರದ

ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 3,586.75 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 24–ಇಂಧನ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಇಂಧನ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಇಂಧನ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 4,31,452.86 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,16,665.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 26–ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ ಹಾಗೂ ಯೋಜನಾ ಇಲಾಖಾ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 19,957.67 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 43,170.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 15–ಮಾಹಿತಿ ತಂತ್ರಜ್ಞಾನ ಇಲಾಖೆ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಉನ್ನತ ಶಿಕ್ಷಣ ಹಾಗೂ ಯೋಜನಾ ಇಲಾಖಾ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮಾಹಿತಿ ತಂತ್ರಜ್ಞಾನ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 7,587.24 ಲಕ್ಷ ರೂ.ಗಳಿಗಿಂತ

ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 2,197.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 5 – ಒಳಾಡಳಿತ ಮತ್ತು ಸಾರಿಗೆ ಇಲಾಖೆ

ಶ್ರೀ ಆರ್. ಅಶೋಕ್ (ಗೃಹ ಮತ್ತು ಸಾರಿಗೆ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಒಳಾಡಳಿತ ಮತ್ತು ಸಾರಿಗೆ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,87,666.72 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 38,735.14 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ 20 – ಲೋಕೋಪಯೋಗಿ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಲೋಕೋಪಯೋಗಿ ಇಲಾಖಾ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಲೋಕೋಪಯೋಗಿ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,56,606.69 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 2,70,209.60 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 12–ವಾರ್ತಾ ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಪ್ರವಾಸೋದ್ಯಮ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ಇಲಾಖಾ ಸಚಿವರ ಪರವಾಗಿ): ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 26,583.17 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 19,060.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು

(ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 6–ಮೂಲಭೂತ ಸೌಕರ್ಯ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಪ್ರವಾಸೋದ್ಯಮ ಮತ್ತು ಮೂಲ ಸೌಲಭ್ಯ ಅಭಿವೃದ್ಧಿ ಇಲಾಖಾ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮೂಲಭೂತ ಸೌಕರ್ಯ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,715.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 75,825.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 17 – ಶಿಕ್ಷಣ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖಾ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳೂವ ಆರ್ಥಿಕ ವರ್ಷದಲ್ಲಿ "ಶಿಕ್ಷಣ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 12,06,069,85 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 14 – ಕಂದಾಯ

ಶ್ರೀ ಜಿ. ಕರುಣಾಕರ ರೆಡ್ಡಿ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–212ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕಂದಾಯ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,55,310.69 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 131.04 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 23 – ಕಾರ್ಮಿಕ

ಶ್ರೀ ಬಿ.ಎನ್.ಬಚ್ಚೇಗೌಡ (ಕಾರ್ಮಿಕ ಇಲಾಖಾ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕಾರ್ಮಿಕ ಇಲಾಖೆ"ಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 53,609.87 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 2,000.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 21 – ಜಲಸಂಪನ್ಮೂಲ

ಶ್ರೀ ಬಸವರಾಜ್ ಬೊಮ್ಮಾಯಿ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಜಲಸಂಪನ್ಮೂಲ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,12,489.30 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 5,85,717.87 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 22 – ಆರೋಗ್ಯ ಮತ್ತು ಕುಟುಂಬ ಕಲ್ಯಾಣ

ಶ್ರೀ ಬಸವರಾಜ್ ಬೊಮ್ಮಾಯಿ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಆರೋಗ್ಯ ಮತ್ತು ಕುಟುಂಬ ಕಲ್ಯಾಣ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,89,263.62 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 43,097.50 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 27 – ಕಾನೂನು

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ

ಶಿಫಾರಸ್ಸಿನ ಮೇರೆಗೆ 31–3–2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಕಾನೂನು" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 48,836.72 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 28 – ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012 ರಂದು ಕೊನೆಗೊಳ್ಳೂವ ಆರ್ಥಿಕ ವರ್ಷದಲ್ಲಿ "ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 9,401.37 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 11 – ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ

ಶ್ರಿ ಬಸವರಾಜ್ ಬೊಮ್ಮಾಯಿ (ಭಾರಿ ಮತ್ತು ಮಾಧ್ಯಮ ನೀರಾವರಿ ಸಚಿವರು) (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ" ಸಂದಾಯ ಮಾಡುವ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,30,089.69 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 12,995.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 10 – ಸಮಾಜ ಕಲ್ಯಾಣ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಸಮಾಜ ಕಲ್ಯಾಣ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ಸಮಾಜ ಕಲ್ಯಾಣ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 2,94,335.79 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ

ಖಾತೆಯಲ್ಲಿ 32,095.08 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 18 – ವಾಣಿಜ್ಯ ಮತ್ತು ಕೈಗಾರಿಕೆ

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) (ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸಚಿವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಾಣಿಜ್ಯ ಮತ್ತು ಕೈಗಾರಿಕೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,26,967.86 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 22,180.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಬೇಡಿಕೆ ಸಂಖ್ಯೆ: 16 – ವಸತಿ

ಶ್ರೀ ವಿ.ಸೋಮಣ್ಣ (ವಸತಿ ಸಚಿವರು): –ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31–3–2012 ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ "ವಸತಿ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 1,23,369.70 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ 1,535.00 ಲಕ್ಷ ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನವಾಗಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಎಸ್.ಸುರೇಶ್‌ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು):– ಮಾನ್ಯ ಅಧ್ಯಕ್ಷರೆ, ಬೇಡಿಕೆಗಳನ್ನೇನು ಮಂಡಿಸಿದ್ದೇವೆ, ಅದನ್ನು ಮಂಜೂರು ಮಾಡಿ ಮತಕ್ಕೆ ಹಾಕಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು: 2011–12ನೇ ಸಾಲಿನ ಅನುದಾನ ಬೇಡಿಕೆಗಳಿಗೆ ಸಂಬಂಧಿಸಿದ ಪ್ರಸ್ತಾವವನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವವು ಹೀಗಿದೆ: